## ದಿನಂಪ್ರತಿ ಅಪರಾಧಗಳ ಮಾಹಿತಿ ದಿನಾಂಕ: 26-11-2022

### ಹುಲಸೂರ ಪೊಲೀಸ್ ಠಾಣೆ ಅಪರಾಧ ಸಂಖ್ಯೆ 78/2022 ಕಲಂ 379 ಐಪಿಸಿ :-

**ದಿನಾಂಕ 22/11/2022 ರಂದು ರಾತ್ರಿ 9-00 ಗಂಟೆಯ ಸುಮಾರಿಗೆ ಫಯಾಧಿ ಶಿವರಾಜ ತಂದೆ ಶರಣಪ್ಪಾ ಬಿರಾದಾರ ವಯಸ್ಸು 28 ವರ್ಷ, ಜಾತಿ ಲಿಂಗಾಯತ, ಉದ್ಯೋಗ ಎಲೇಕ್ಟ್ರೀಕಲ್ ಕೆಲಸ ಮು: ಗೌರ ತಾ: ಬಸವಕಲ್ಯಾಣ ಸ್ಪೆಲೆಂಡರ್ ಮೋಟಾರ ಸೈಕಲ್ ನಂ ಕೆಎ-56 ಇ-7982 ನೇದನ್ನು ಮನೆಯ ಮುಂದೆ ನಿಲ್ಲಿಸಿಸಿದಾಗ ದಿನಾಂಕ 22/11/2022 ರಂದು ರಾತ್ರಿ 12-00 ರಿಂದ ದಿನಾಂಕ 23/11/2022 ರಂದು ನಸುಕಿನ ಜಾವ 5-00 ಗಂಟೆಯ ಅವಧಿಯಲ್ಲಿ ಮನೆಯ ಮುಂದೆ ನಿಲ್ಲಿಸಿದ ಸ್ಪೆಲೆಂಡರ್ ಮೋಟಾರ ಸೈಕಲ್ ನಂ ಕೆಎ-56 ಇ-7982 ನೇದು ಯಾರೋ ಕಳ್ಳರು ಕಳ್ಳತನ ಮಾಡಿಕೊಂಡು ಹೋಗಿರುತ್ತಾರೆ. ಕಾರಣ ಈ ಬಗ್ಗೆ ಕಾನೂನು ಕ್ರಮ ಜರುಗಿಸಲು ವಿನಂತಿ ಇರುತ್ತದೆ. ಅಂತಾ ನೀಡಿದ ದೂರಿನ ಮಏರೆಗೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೋಳ್ಳಲಾಗಿದೆ.**

### ಮುಡಬಿ ಪೊಲೀಸ ಠಾಣೆ ಅಪರಾಧ ಸಂಖ್ಯೆ 82/2022 ಕಲಂ 78(3) ಕೆಪಿ ಕಾಯ್ದೆ ;-

ದಿನಾಂಕ 25/11/2022 ರಂದು 1400 ಗಂಟೆಗೆ ಪಿ ಎಸ್ ಐ ಬಸಲಿಂಗಪ್ಪಾ ಠಾಣೆಯಲ್ಲಿದ್ದಾಗ ಖಚಿತ ಬಾತ್ಮಿ ಬಂದಿದ್ದೇನೆಂದರೆ ಖೆರ್ಡಾ ಬಿ ಗ್ರಾಮದ ಬಸವೇಶ್ವರ ಚೌಕ ಹತ್ತಿರ ಸಾರ್ವಜನಿಕ ಸ್ಥಳದಲ್ಲಿ ಒಬ್ಬ ವ್ಯಕ್ತಿ ಮಟಕಾ ಎಂಬ ನಸೀಬಿನ ಜೂಜಾಟದ ನಂಬರಗಳು ಬರೆದುಕೊಂಡು ಸಾರ್ವಜನಿಕರಿಗೆ 1 ರೂಪಾಯಿಗೆ 90 ರೂಪಾಯಿ ಕೊಡುವುದಾಗಿ ಹೇಳಿ ಮಟಕಾ ಬರೆದುಕೊಳ್ಳುತ್ತಿದ್ದಾನೆ ಅಂತ ಖಚಿತ ಬಾತ್ಮಿ ಬಂದ ಮೇರೆಗೆ ಸಿಬ್ಬಂದಿಯೊಂದಿಗೆ ಹೋಗಿ ನೋಡಿದಾಗ ಖೆರ್ಡಾ ಬಿ ಗ್ರಾಮದ ಬಸವೇಶ್ವರ ಚೌಕ್ ಹತ್ತಿರ ಸಾರ್ವಜನಿಕ ಸ್ಥಳದಲ್ಲಿ ಒಬ್ಬ ವ್ಯಕ್ತಿ ಸಾರ್ವಜನಿಕರಿಗೆ ಕೂಗುತ್ತಾ ಮಟಕಾ ನಂಬರಗಳು ಬರೆಯಿಸಿರಿ 01 ರೂಪಯಿಗೆ 90 ರೂಪಾಯಿ ಪಡೆಯಿರಿ ಅಂತ ಕೂಗಾಡುತ್ತಿದ್ದು ಕಂಡು ನಾನು ಸಿಬ್ಬಂಧಿಯವರೊಂದಿಗೆ ಪಂಚರ ಸಮಕ್ಷಮ 1225 ಗಂಟೆಗೆ ಸದರಿ ವ್ಯಕ್ತಿಯ ಮೇಲೆ ದಾಳಿ ಮಾಡಿ ಅವನನ್ನು ಹಿಡಿದು ಅವನ ಹೆಸರು ಮತ್ತು ವಿಳಾಸ ವಿಚಾರಿಸಲು ಅವನು ತನ್ನ ಹೆಸರು ಗೌರಿಶಂಕರ ತಂದೆ ದಯಾನಂದ ಬಿರಾದಾರ ವಯ: 37 ವರ್ಷ ಜಾತಿ: ಲಿಂಗಾಯತ ಉ: ವ್ಯಾಪಾರ ಸಾ: ಖೆರ್ಡಾ ಬಿ ಅಂತ ತಿಳಿಸಿದನು. ನಂತರ ನಾನು ಪಂಚರ ಸಮಕ್ಷಮ ಸದರಿ ವ್ಯಕ್ತಿಯ ಅಂಗ ಜಡ್ತಿ ಮಾಡಲು ಅವನ ಹತ್ತಿರ ಮಟಕಾ ಜೂಜಾಟಕ್ಕೆ ಸಂಬಂಧಿಸಿದ 1200/- ರೂಪಾಯಿ ನಗದು ಹಣ ಮತ್ತು ಒಂದು ಬಾಲ್ ಪೆನ್ನು ಹಾಗೂ ಎರಡು ಚೀಟಿಗಳು ಅದರ ಮೇಲೆ ಮಟಕಾ ನಂಬರ ಬರೆದದ್ದು ಅವುಗಳನ್ನು ಜಪ್ತಿ ಮಾಡಿಕೊಂಡು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೋಳ್ಳಲಾಗಿದೆ.